ಕರ್ನಾಟಕ ವಿಧಾನಸಭೆ

(ಹದಿನಾಲ್ಕನೇ ವಿಧಾನಸಭೆ)
ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 08ನೇ ಫೆಬ್ರವರಿ, 2017
(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಎರಡನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಎರಡನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು:-

ಉಭಯ ಸದನಗಳಿಂದ ಅಂಗೀಕಾರವಾದಂತೆ ಹಾಗೂ ಮಾನ್ಯ ರಾಜ್ಯಪಾಲರಿಂದ ಪುನರ್ ಪರಿಗಣನೆಗೆ ಹಿಂತಿರುಗಿಸಲ್ಪಟ್ಟಿರುವ 2016ನೇ ಸಾಲಿನ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದಿಡುವುದು.

3. ವರದಿಯನ್ನೊಪ್ಪಿಸುವುದು

ಶ್ರೀ ಜೆ.ಆರ್. ಲೋಬೋ (ಅಧ್ಯಕ್ಷರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು – 2016-17ನೇ ಸಾಲಿನ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 6ನೇ ವರದಿಯನ್ನು ಒಪ್ಪಿಸುವುದು.

4. ಹಕ್ಕುಚ್ಯುತಿ ಸೂಚನೆ

(1) **ಶ್ರೀ ಹೆಚ್.ಡಿ. ರೇವಣ್ಣ** ರವರು – ಹಿಮ ಕುಸಿತದಲ್ಲಿ ಮೃತರಾದ ಶ್ರೀ. ಡಿ.ಪಿ. ಸಂದೀಪ್ ಕುಮಾರ್ ರವರ ಕುಟುಂಬಕ್ಕೆ ರಾಜ್ಯ ಸರ್ಕಾರದಿಂದ ಮಂಜೂರಾಗಿದ್ದ ರೂ.25.00 ಲಕ್ಷ ಮೊತ್ತದ ಚೆಕ್‌ನ್ನು ಸ್ಥಳೀಯ ಶಾಸಕರ ಗಮನಕ್ಕೆ ತರದೇ ವಿತರಿಸಿರುವ ಹಾಸನದ ಜಿಲ್ಲಾಡಳಿತ ಹಾಗೂ ಹಾಸನ ತಾಲ್ಲೂಕಿನ ತಹಶೀಲ್ದಾರ್‌ರವರ ವಿರುದ್ಧ ಹಕ್ಕುಚ್ಯುತಿ ಸೂಚನೆಯನ್ನು ಮಂಡಿಸುವುದು.

(2) **ಶ್ರೀ ಎಂ.ಟಿ. ಕೃಷ್ಣಪ್ಪ** ರವರು – ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಚುನಾವಣಾ ಸಂದರ್ಭದಲ್ಲಿ ನಡೆದ ಘಟನೆಯ ಸಂಬಂಧ ತುರುವೇಕೆರೆ ಪೋಲಿಸ್ ಠಾಣೆಯ ಪೋಲಿಸ್ ಅಧಿಕಾರಿಗಳ ವಿರುದ್ಧ ಹಕ್ಕುಚ್ಯುತಿ ಸೂಚನೆಯನ್ನು ಮಂಡಿಸುವುದು.

5. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ಚರ್ಚೆ.

6. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರು) ಅವರು:-

ಅ) 2017ನೇ ಸಾಲಿನ ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ)ಹಾಗೂ ವಿಧೇಯಕವನ್ನು ಮಂಡಿಸುವುದು.

7. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ವಿ. ಸುನೀಲ್ ಕುಮಾರ್** ಇವರು – ಉಡುಪಿ ಜಿಲ್ಲೆಯ ಕಾರ್ಕಳ ತಾಲೂಕಿನ ನಿಟ್ಟೆ ಸಮುದಾಯ ಆರೋಗ್ಯ ಕೇಂದ್ರದ ನಿರ್ವಹಣೆಯನ್ನು Public Private Partnership ಮಾದರಿಯಲ್ಲಿ ಡಾ॥ ಕೆ.ಎಸ್. ಹೆಗ್ಡೆ ವೈದ್ಯಕೀಯ ಕಾಲೇಜು ನಿಟ್ಟೆ ಇವರಿಗೆ ವಹಿಸಿಕೊಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ** ಇವರು – ಕನ್ನಡ ಸಾಹಿತ್ಯವನ್ನು ಉತ್ತುಂಗಕ್ಕೇರಿಸಿದ ಹಲಸಂಗಿ ಮಧುರಚನ್ನರು, ಚಡಚಣದ ಸಿಂಪಿ ಲಿಂಗಣ್ಣನವರು ಹಾಗೂ ಅಗರಖೇಡದ ಶ್ರೀರಂಗರು ಅವರುಗಳ ಮನೆ ಮತ್ತು ಸಮಾಧಿಗಳನ್ನು ಸಾಹಿತ್ಯಿಕ ಕೇಂದ್ರಗಳನ್ನಾಗಿ ಅಥವಾ ಸ್ಮಾರಕಗಳನ್ನಾಗಿ ಮಾಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

3. **ಶ್ರೀ ಕೆ. ಅಭಯ ಚಂದ್ರ** ಇವರು – ಕಂಬಳ ಕ್ರೀಡೆಯನ್ನು ಪ್ರತಿ ವರ್ಷ ಯಶಸ್ವಿಯಾಗಿ ಜರುಗಿಸಲು ಅನುಕೂಲವಾಗುವಂತೆ ವಿಶೇಷ ಸುಗ್ರೀವಾಜ್ಞೆ ಹೊರಡಿಸಲು ಕ್ರಮ ಜರುಗಿಸುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

4. **ಶ್ರೀ ಲಕ್ಷಣ ಸಂಗಪ್ಪ ಸವದಿ** ಇವರು – ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಸಣ್ಣ ನೀರಾವರಿ ಉಪ ವಿಭಾಗದ ಸಿಬ್ಬಂದಿಗಳಿಗೆ ವೇತನ ನೀಡುವಲ್ಲಿ ವಿಳಂಬ ಮತ್ತು ವೇತನದಲ್ಲಿ ಪ್ರತಿ ತಿಂಗಳು 100 ರಿಂದ 200ರೂ. ಗಳನ್ನು ಕಡಿತಗೊಳಿಸುತ್ತಿರುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

5. **ಶ್ರೀ ಕೆ.ಬಿ. ಪ್ರಸನ್ನ ಕುಮಾರ್** ಇವರು – ರಾಜ್ಯದಲ್ಲಿನ ವಿದ್ಯುತ್ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ " ಹೊರ ಗುತ್ತಿಗೆ ನೌಕರ " ರನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

6. **ಶ್ರೀ ಹೆಚ್.ಡಿ. ರೇವಣ್ಣ** ಇವರು – ಹಾಸನ ಜಿಲ್ಲೆಯ ಹೊಳೆನರಸೀಪುರ ಮತ್ತು ಚನ್ನರಾಯಪಟ್ಟಣ ತಾಲ್ಲೂಕಿನ ಹಲವಾರು ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಿಂದ ಶುದ್ಧ ಕುಡಿಯುವ ನೀರನ್ನು ಒದಗಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

7. **ಶ್ರೀ ಯು.ಬಿ. ಬಣಕಾರ** ಇವರು – ಹಿರೇಕೆರೂರ ಮತ್ತು ರಾಣೆಬೆನ್ನೂರ ತಾಲ್ಲೂಕಿನ ಹಲವಾರು ಕೆರೆಗಳಿಗೆ ನೀರು ತುಂಬಿಸುವ ಸಂಬಂಧ ಅಸುಂಡಿ ಏತ ನೀರಾವರಿ ಯೋಜನೆಯನ್ನು ಮಂಜೂರು ಮಾಡಿ ಹಣ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

8. **ಶ್ರೀ ವಿ. ಸುನೀಲ್ ಕುಮಾರ್** ಇವರು – ಉಡುಪಿ ಜಿಲ್ಲೆಯ ಕಾರ್ಕಳ ನಗರದ ಒಳಚರಂಡಿ ವ್ಯವಸ್ಥೆಯನ್ನು ಸುಧಾರಣೆಗೊಳಿಸುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

9. **ಶ್ರೀಮತಿ ವೈ. ರಾಮಕ್ಕ** ಇವರು – ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಕೆ.ಜಿ.ಎಫ್. ವಿಧಾನಸಭಾ ಕ್ಷೇತ್ರದ ಬಿ.ಜಿ.ಎಂ.ಎಲ್. ಕಂಪನಿಯ ವ್ಯಾಪ್ತಿಯಲ್ಲಿ ಬೆಂಗಳೂರಿನಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸುರಿಯಲು ಉದ್ದೇಶಿಸಿರುವುದರಿಂದ ಉಂಟಾಗುವ ತೊಂದರೆಗಳ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

10. **ಶ್ರೀ ಎನ್. ಚಲುವರಾಯಸ್ವಾಮಿ** ಇವರು – ರಾಜ್ಯದ ಕೊಬ್ಬರಿಗೆ ಮತ್ತು ತೆಂಗಿನ ಕಾಯಿಗೆ ಹೆಚ್ಚಿನ ಬೆಂಬಲ ಬೆಲೆ ನಿಗದಿಪಡಿಸುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

11. **ಶ್ರೀಯುತರುಗಳಾದ ಎನ್.ಹೆಚ್. ಕೋನರಡ್ಡಿ, ಹೆಚ್.ಡಿ. ರೇವಣ್ಣ, ಮಧು ಬಂಗಾರಪ್ಪ ಮತ್ತು ಡಾ॥ ನಾರಾಯಣಗೌಡ** ಇವರುಗಳು – ರಾಜ್ಯದಲ್ಲಿ ಕಾರ್ಮಿಕ ಇಲಾಖಾ ವತಿಯಿಂದ ನಿರ್ಮಿಸಲಾಗುವ ಐ.ಟಿ.ಐ. ಕಾಲೇಜು ಕಟ್ಟಡ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖೆಗೆ ವಹಿಸುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

12. **ಶ್ರೀ. ಕೆ.ಎಂ. ಶಿವಲಿಂಗೇಗೌಡ** ಇವರು – ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಯವರು ಸ್ತ್ರೀ ಶಕ್ತಿ ಸಂಘಗಳಿಗೆ ವಾರ ಹಾಗೂ ಮಾಸಿಕ ಕಂತುಗಳ ರೂಪದಲ್ಲಿ ನೀಡಿದ್ದ ಸಾಲ ಮರುಪಾವತಿಸಲು ವಿಫಲರಾಗಿರುವ ಸದಸ್ಯರುಗಳಿಗೆ ಕಂಪನಿಯವರು ನೀಡುತ್ತಿರುವ ಕಿರುಕುಳದ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

13. **ಶ್ರೀ ಸಿ.ಎನ್. ಬಾಲಕೃಷ್ಣ** ಇವರು – ಬೆಂಗಳೂರಿನ ಜಯನಗರದ ಸರ್ಕಾರಿ ಸಂಜಯಗಾಂಧಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಹೆಣ್ಣು ಮಗು ಅಪಹರಣಗೊಂಡಿರುವ ಘಟನೆಯ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

8. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಕೆ.ಎಂ. ಶಿವಲಿಂಗೇಗೌಡ, ಹೆಚ್.ಎಸ್. ಪ್ರಕಾಶ್ ಇವರುಗಳು – ತೀವ್ರ ಮಳೆ ಅಭಾವದಿಂದ ಹಾಗೂ ಅಂತರ್ ಜಲ ಕೊರತೆಯಿಂದ ಕುಡಿಯುವ ನೀರಿಗೆ ತುಂಬ ತೊಂದರೆಯಾಗಿರುವ ಹಾಸನ ಜಿಲ್ಲೆಯ ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿರುವ ಹಲವಾರು ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲು ಯಾವುದೇ ಕ್ರಮವನ್ನು ಕೈಗೊಳ್ಳದೇ ಇರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm